# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 760 |
| ಸದಸ್ಯರ ಹೆಸರು | ಡಾ: ಎಂ. ಜಿ. ಮುಳೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 12-12-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ ಜಿಲ್ಲೆ ಹುಮನಾಬಾದ ತಾಲ್ಲೂಕು ಘಾಟಬೊರಾಳ ಗ್ರಾಮದಲ್ಲಿ ರೈತ ಸಂಪರ್ಕ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; | ಬೀದರ ಜಿಲ್ಲೆ ಹುಮನಾಬಾದ ತಾಲ್ಲೂಕು ಘಾಟಬೋರಾಳ ಗ್ರಾಮದಲ್ಲಿ ರೈತ ಸಂಪರ್ಕ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಘಾಟಬೋರಾಳ ಗ್ರಾಮವು ಹುಮನಾಬಾದ ತಾಲ್ಲೂಕಿನ ದುಬಲಗುಂಡಿ ಹೋಬಳಿಯ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಗೆ ಒಳಪಡುತ್ತದೆ. |
| ಆ) | ಹಾಗಿದ್ದಲ್ಲಿ, ರೈತ ಸಂಪರ್ಕವನ್ನು ಕೇಂದ್ರವನ್ನು ಸ್ಥಾಪಿಸಿ ಅತಿ ಹಿಂದುಳಿದ ಹುಮನಾಬಾದ ತಾಲ್ಲೂಕು ಘಾಟಬೊರಾಳ ಗ್ರಾಮದ ರೈತರಿಗೆ ಅನುಕೂಲ ಮಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮ ವಹಿಸುವುದೆ? (ವಿವರ ಒದಗಿಸುವುದು) | ಸರ್ಕಾರಿ ಆದೇಶ ಸಂಖ್ಯೆ: ಕೃತೋಇ 239 ಕೃಯೋಕಾ 99 ದಿನಾಂಕ: 29.06.2000ರಂತೆ ಪ್ರತಿ ಕಂದಾಯ ಹೋಬಳಿಗೆ ಒಂದರಂತೆ ರೈತ ಸಂಪರ್ಕ ಕೇಂದ್ರ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಆದೇಶದನ್ವಯ ಹೋಬಳಿಗೊಂದರಂತೆ ರೈತ ಸಂಪರ್ಕ ಕೇಂದ್ರ ಕಾರ್ಯನಿರ್ವಹಿಸುತ್ತಿರುವುದರಿಂದ ಹುಮನಾಬಾದ ತಾಲ್ಲೂಕಿನ ಘಾಟಬೋರಾಳ ಗ್ರಾಮದಲ್ಲಿ ಹೊಸದಾಗಿ ರೈತ ಸಂಪರ್ಕ ಕೇಂದ್ರ ಆರಂಭಿಸಲು ಅವಕಾಶವಿರುವುದಿಲ್ಲ. |

ಸಂಖ್ಯೆ: AGRI/356/ACT/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು